ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಾಟೀ ಸವಾಲು 2ನೇ ಎದುರುದಾರರ ಪರ ವಕೀಲರಿಂದಃ-

ನನಗೆ ಈಗ 36 ವರ್ಷವಯಸ್ಸು. ನಾನು ವ್ಯವಸಾಯ ಮಾಡಿಕೊಂಡಿರುತ್ತೇನೆ. ನಾನು 8ನೇ ತರಗತಿವರೆಗೆ ಕಲಿತಿದ್ದೇನೆ. ಆಧಾರ್ ಮತ್ತು ರೇಷನ್ ಕಾರ್ಡ ಮಾಡಿಸಿಕೊಂಡಿದ್ದೇನೆ ಅವುಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ತೊಂದರೆ ಇಲ್ಲ. ಅಪಘಾತವಾದ ದಿನ ನಾನು ರಾಜೇಶ್ ಎಂಬುವವರ ಜೊತೆ ಮೋಟಾರ್ ಸೈಕಲ್ ನ ಹಿಂಬದಿಯಲ್ಲಿ ಕುಳಿತುಕೊಂಡು ರಾಮನಗರದಿಂದ ನಮ್ಮ ಮನೆಗೆ ಹೋಗುತ್ತಿದ್ದೆನು. ದ್ವಿ ಚಕ್ರ ವಾಹನ ಚಾಲನೆ ಮಾಡಲು ನನ್ನ ಬಳಿ ಡಿ.ಎಲ್ ಇದೆ. ಅದನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ನನಗೆ ತೊಂದರೆ ಇಲ್ಲ. ರಾಜೇಶ್ ರವರ ಬಳಿ ಸಹ ಡಿ.ಎಲ್ ಇದ್ದು ಅದನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ತೊಂದರೆ ಇಲ್ಲ.

ಅಪಘಾತವಾದ ನಂತರ ನನಗೆ ಪ್ರಜ್ಞೆ ಇತ್ತು. ಅಪಘಾತವಾದ ನಂತರ ನಮ್ಮ ವಾಹನಕ್ಕೆ ಡಿಕ್ಕಿ ಪಡಿಸಿದ ವಾಹನ ಆಟೋ ಎಂದು ಗೊತ್ತಾಗಿತ್ತು. ಆಟೋ ಚಾಲಕ ಯಾರು ಎಂದು ನಾನು ನೋಡಿರುವುದಿಲ್ಲ. ನಮ್ಮ ವಾಹನಕ್ಕೆ ಡಿಕ್ಕಿಪಡಿಸಿದ ನಂತರ ಆಟೋ ಸ್ಥಳದಲ್ಲೇ ನಿಲ್ಲಿಸಿದ್ದರು. ಅಪಘಾತ ನಾನು ಪ್ರಯಾಣಿಸುತ್ತಿದ್ದ ವಾಹನದ ಚಾಲಕನ ಅಜಾಗರೂಕತೆಯಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ಅಪಘಾತವಾದ ದಿನ ನಾನು ಮತ್ತು ವಾಹನ ಚಾಲಕ ಹೆಲ್ಮೆಟ್ ಧರಿಸಿದ್ದೆವು. ಅಪಘಾತವಾನ್ನು ಕಣ್ಣಾರೆ ನೋಡಿದ ಪ್ರತ್ಯಕ್ಷ ಸಾಕ್ಷಿದಾರರನ್ನು ಕರೆಯಿಸಿ ಸಾಕ್ಷಿ ನುಡಿಸಲು ನನಗೆ

ತೊಂದರೆ ಇಲ್ಲ.

ಅಪಘಾತದಿಂದ ನನಗೆ ಮೂಳೆ ಮುರಿತ ಆಗಿಶಸ್ತ್ರ ಚಿಕಿತ್ಸೆ ಮಾಡಿದ್ದಾರೆ. ನನಗೆ ಶಸ್ತ್ರ ಚಿಕಿತ್ಸೆ ಮಾಡಿದ ವೈದ್ಯರನ್ನು ಕರೆಯಿಸಿ ಸಾಕ್ಷಿ ನುಡಿಸುತ್ತೇನೆ. ನಾನು ಹಾಜರುಪಡಿಸಿರುವ ವೈದ್ಯಕೀಯ ಬಿಲ್ ಗಳನ್ನು ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. 400 ರೂಪಾಯಿ ಆಸ್ಪತ್ರೆಗೆ ಹೋಗಿ ಬಂದು ಮಾಡಿದ್ದಕ್ಕೆ ಖರ್ಚಾಗಿತ್ತದೆ ಎಂದು ತೋರಿಸಲು ದಾಖಲೆ ಹಾಜರುಪಡಿಸಿದ್ದೇನೆ. ನನ್ನ ಅರ್ಜಿಯಲ್ಲಿ ಹೇಳಿರುವಂತೆ ಪ್ರಯಾಣ, ಉಟೋಪಾಯರಕ್ಕೆ ಖರ್ಚಾಗಿರುವ ಬಗ್ಗೆ ಯಾವುದೇ ದಾಖಲೆ ಹಾಜರುಪಡಿಸದೇ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಅಪಘಾತಕ್ಕೂ ಮುನ್ನ ಹೈನುಗಾರಿಕೆಯಿಂದ ಸಂಪಾದನೆ ಮಾಡುತ್ತಿದ್ದೆ ಎಂದು ತೊರಿಸಲು ಹಾಲಿನ ಡೈರಿಂಂದ ಪಡೆದ ಯಾವುದೇ ದಾಖಲೆ ಹಾಜರುಪಡಿಸದೇ ಇದ್ದರೂ ಸಹ ಸುಳ್ಳು ಸಾಕ್ಷಿ ನಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಯಾವುದೇ ದೈಹಿಕ ಆರ್ಥಿಕ ನಷ್ಟ ಉಂಟಾಗಿಲ್ಲದೇ ಇದ್ದರೂ ಸಹ ನಾನು ಪರಿಹಾರ ಹಣ ಪಡೆಯುವ ಸಲುವಾಗಿ ಸುಳ್ಳು ಅರ್ಜಿ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ- ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ನಿವೇದಿತ ಟಿ.ಎಂ.)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯಾ ಮಂಡಳಿಯ
ಪೀಠಾಧಿಕಾರಿಗಳು